## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಸೂರ್ಯಕಾಂತ ಶಂಕರಗೊಂಡ, ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತ್ ಯಾದಗಿರಿ, ಇವರ ವಿರುದ್ಧ ಶಿಸ್ತುಕ್ರಮದ ಅಂತಿಮ ಆದೇಶ.

**ಓದಲಾಗಿದೆ:-** 1. ಶ್ರೀ ಸೂರ್ಯಕಾಂತ ಶಂಕರಗೊಂಡ, ಇವರಿಗೆ ಕಾರಣ ಕೇಳುವ ನೋಟಿಸ್ ದಿನಾಂಕ: 28.03.2009

2) ಸರ್ಕಾರದ ನೆನಪೋಲೆ ಪತ್ರ ದಿನಾಂಕ: 23.03.2010, 28.07.2010, 21.02.20111, 18.08.2011 ಮತ್ತು 17.08.2012ರ

****

**ಪ್ರಸ್ತಾವನೆ:**

ಯಾದಗಿರಿ ಜಿಲ್ಲಾ ಪಂಚಾಯತ್‌ನಲ್ಲಿ ಯೋಜನಾ ನಿರ್ದೇಶಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಸೂರ್ಯಕಾಂತ ಶಂಕರಗೊಂಡ, ಇವರು 2000-01 ರಿಂದ 2007-08ನೇ ಸಾಲಿನವರೆಗೆ ಬೀದರ ನಗರದಲ್ಲಿ 70x40 ಅಡಿಯ ಎರಡು ನಿವೇಶನ ಗುಲ್ಬರ್ಗಾ ಮಹಾನಗರದಲ್ಲಿ, 40x60 ವಿಸ್ತೀರ್ಣದ ನಿವೇಶನಗಳ ಬಗ್ಗೆ ಹಾಗೂ 2006-07ನೇ ಸಾಲಿನಲ್ಲಿ ತಮ್ಮ ಪತ್ನಿಯವರ ಹೆಸರನಲ್ಲಿ ನಾವದಗೇರಿ ಗ್ರಾಮದಲ್ಲಿ ಎರಡು ಎಕರೆ ಜಮೀನನ್ನು ಹಾಗೂ ಮಾರುತಿ ಆಲ್ಟೋ ಕಾರನ್ನು ರೂ. 3.11.48/-ಗಳಲ್ಲಿ ಸಿಂಡಿಕೇಟ್ ಬ್ಯಾಂಕ್‌ನಲ್ಲಿ ಸಾಲ ಪಡೆದು ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿಯನ್ನು ಪಡೆಯದೇ ಖರೀದಿಸಿರುವ ಹಾಗೂ ಕೃಷಿ ಉತ್ಪನ್ನದಿಂದ ಬಂದ ಆದಾಯಕ್ಕೆ ಸಂಬಂಧಿಸಿದಂತೆ, ಯಾವುದೇ ದಾಖಲೆಗಳನ್ನು ಸಲ್ಲಿಸದೆ ಇರುವ ಆರೋಪಕ್ಕೆ ಸಂಬಂಧಿಸಿದಂತೆ, ಮೇಲೆ ಓದಲಾದ(1)ರ ದಿನಾಂಕ: 28.03.2009 ರಲ್ಲಿ ಕಾರಣ ಕೇಳುವ ನೋಟಿಸು ಜಾರಿ ಮಾಡಲಾಗಿತ್ತು. ಈ ಸಂಬಂಧ ಅಧಿಕಾರಿಗೆ ಮೇಲೆ ಓದಲಾದ(2)ರ ದಿನಾಂಕ; 23.03.2010, 28.07.2010, 21.02.20111, 18.08.2011 ಮತ್ತು 17.08.2012ರ ಪತ್ರಗಳಲ್ಲಿ ಮಾಹಿತಿ/ಉತ್ತರ ಸಲ್ಲಿಸುವಂತೆ ತಿಳಿಸಲಾಗಿದ್ದರೂ, ಸದರಿ ಕಾರಣ ಕೇಳುವ ನೋಟಿಸಿಗೆ ಉತ್ತರ ನೀಡದೇ ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಪಡೆಯದೇ ಸ್ಥಿರಾಸ್ತಿ ಮತ್ತು ಚರಾಸ್ತಿಗಳನ್ನು ಖರೀದಿಸಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 23(2)ರನ್ನು ಸ್ಪಷ್ಟವಾಗಿ ಉಲ್ಲಂಘಿಸಿರುತ್ತಾರೆ. ಆದುದರಿಂದ, ಸದರಿಯವರ ಕರ್ತವ್ಯಲೋಪಕ್ಕೆ ಸಂವಾದಿಯಾಗಿ ಐಂದು ಕಾಲಿಕ ವೇತನ ಶ್ರೇಣಿಯನ್ನು ಸಂಚಿತ ಪರಿಣಾಮ ಹೊಂದದಂತೆ ತಡೆಹಿಡಿಯುವ ದಂಡನೆಯನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 200 ಎಪಿಆರ್ 2016 ಬೆಂಗಳೂರು ದಿನಾಂಕ:29-06-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಸೂರ್ಯಕಾಂತ ಶಂಕರಗೌಡ, ಯೋಜನಾ ನಿರ್ದೇಶಕರು ಜಿಲ್ಲಾ ಪಂಚಾಯತ್ ಯಾದಗಿರಿ, ಇವರ ಕರ್ತವ್ಯಲೋಪಕ್ಕೆ ಸಂವಾಧಿಯಾಗಿ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 8(iii) ರಡಿಯಲ್ಲಿ ಇವರ ಮುಂದಿನ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮವಿಲ್ಲದೇ **ತಡೆಹಿಡಿಯುವ ದಂಡನೆಯನ್ನು** ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

29/6/16
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಜಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1. ಮಹಾಲೇಖಪಾಲರು(ಜಿ&ಎಸ್ಎಸ್ಎ)/(ಇ&ಆರ್ಎಸ್ಎ)/(ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ
3. ಸಂಬಂಧಿಸಿದ ಅಧಿಕಾರಿಗೆ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ(ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.